ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017–18 ದಿನಾಂಕ: 27–9–2017

# ಪತ್ರಿಕಾ ಆಮಂತ್ರಣ

1. ಪತ್ರಿಕಾಗೋಷ್ಠಿ:

ಬಸವರಾಜ ರಾಯರೆಡ್ಡಿ

ಉನ್ನತ ಶಿಕ್ಷಣ ಸಚಿವರು

ದಿನಾಂಕ: 28–9–2017 ಗುರುವಾರ ಮಧ್ಯಾಹ್ನ 12–00 ಗಂಟೆಗೆ

ಸ್ಥಳ: ಕೊಠಡಿ ಸಂಖ್ಯೆ 317, ಮೂರನೇ ಮಹಡಿ, ವಿಧಾನ ಸೌಧ, ಬೆಂಗಳೂರು

# ಪತ್ರಿಕಾ ಪ್ರಕಟಣೆ

**ಸಂಖ್ಯೆ:132/252**

## ವ್ಯವಸಾಯ, ಕೈಗಾರಿಕೆ ಮನುಷ್ಯನ ಎರಡು ಕಣ್ಣುಗಳು– ವೆಂಕಯ್ಯನಾಯ್ಡು

ಬೆಂಗಳೂರು, ಸೆಪ್ಟೆಂಬರ್ 27 ( ಕರ್ನಾಟಕ ವಾರ್ತೆ) :

ದೇಶ ಸಾಮಾಜಿಕವಾಗಿ ಹಾಗೂ ಆರ್ಥಿಕವಾಗಿ ಅಭಿವೃದ್ಧಿ ಹೊಂದಬೇಕಾದರೆ ವೈಜ್ಞಾನಿಕವಾದ ವ್ಯವಸಾಯ ಹಾಗೂ ವ್ಯವಸ್ಥಿತವಾದ ಕೈಗಾರಿಕರಣ ಆಗಬೇಕು. ಇವುಗಳು ಮನುಷ್ಯನಿಗೆ ಎರಡು ಕಣ್ಣುಗಳು ಹೇಗೆ ಮುಖ್ಯವೋ ಅದೇ ರೀತಿ. ದೇಶದ ಸರ್ವೋತ್ತಮ ಅಭಿವೃದ್ಧಿಗೆ ವ್ಯವಸಾಯ ಮತ್ತು ಕೈಗಾರಿಕೆಗಳು ಅತಿ ಮುಖ್ಯ ಎಂದು ಉಪ ರಾಷ್ಟ್ರಪತಿ ವೆಂಕಯ್ಯ ನಾಯ್ಡು ಅವರು ತಿಳಿಸಿದರು.

ಇಂದು ಭಾರತೀಯ ವಿಜ್ಞಾನ ಸಂಸ್ಥೆಯಲ್ಲಿ ವಿದ್ಯಾರ್ಥಿಗಳ ಜೊತೆ ಸಂವಾದ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡುತ್ತಾ ನಮ್ಮ ನಾಗರಿಕತೆಗೆ ತುಂಬಾ ಇತಿಹಾಸವಿದೆ. ನೀವು ವಿದ್ಯಾರ್ಥಿಗಳು ವಿದೇಶಕ್ಕೆ ಹೋಗಬೇಡಿ ಎಂದು ಹೇಳುವುದಿಲ್ಲ. ವಿದೇಶದಿಂದ ಬಂದ ನಂತರ ನಮ್ಮ ನೆಲದಲ್ಲಿ ಉತ್ತಮವಾದ ಸಾಧನೆ ಮಾಡಿ ದೇಶದ ಅಭಿವೃದ್ಧಿಗೆ ಪಣ ತೊಡಬೇಕು ಎಂದರು.

ಯಾರು ದೇಶದ ಅಭಿವೃದ್ಧಿಗೆ ದುಡಿಯುತ್ತಾರೋ ಅವರು ದೊಡ್ಡ ವ್ಯಕ್ತಿ ಆಗುತ್ತಾರೆ. ಯಾವುದೇ ಒಂದು ಕೆಲಸ ಉತ್ತಮ ಫಲಿತಾಂಶ ನೀಡಬೇಕಾದರೆ ಮಾನವನ ಭಾಗವಹಿಸುವಿಕೆ ಬಹಳ ಮುಖ್ಯ. ನೀವು ಸಧ್ಯ ವಿದ್ಯಾರ್ಥಿಗಳಾಗಿದ್ದೀರಾ ಮುಂದಿನ ದಿನಗಳಲ್ಲಿ ಯಾವುದೇ ಹುದ್ದೆಯನ್ನು ಅಲಂಕರಿಸಿದಾಗ ದೇಶದ ಬಗ್ಗೆ ಪ್ರೀತಿ ಇಟ್ಟುಕೊಂಡು ತಂಡ ತಂಡವಾಗಿ ಕೆಲಸ ನಿರ್ವಹಿಸಿದರೆ ಉತ್ತಮ ಫಲಿತಾಂಶ ಬರುತ್ತದೆ ಎಂದರು.

ನಮ್ಮ ದೇಶದಲ್ಲಿ ಹೆಚ್ಚು ಯುವ ಶಕ್ತಿಯ ಸಂಪನ್ಮೂಲವಿದೆ, ಜೀವನವೆ ಒಂದು ಸ್ಪರ್ಧೆ, ನೀವು ಭವಿಷ್ಯದ ವಿಜ್ಞಾನದ ನಾಯಕರುಗಳು. ನಿಮ್ಮ ಕಲ್ಪನೆ ಯಾವ ರೀತಿ ಇರಬೇಕೆಂದರೆ ಒಂದು ಪ್ರದೇಶದಲ್ಲಿ ಸಾರ್ವಜನಿಕರು ವಾಸ ಮಾಡಲು ಯೋಗ್ಯವಾದ ರೀತಿ ಇರಬೇಕು. ಅಂದರೆ ಸ್ವಚ್ಛತೆ, ಉತ್ತಮ ಪರಿಸರ, ಯಾವುದೇ ರೀತಿಯ ಮಾಲಿನ್ಯ ರಹಿತವಾಗಿರಬೇಕು. ಇದೇ ಸ್ಮಾರ್ಟ್ ಸಿಟಿ ಕಾರ್ಯಕ್ರಮದ ಉದ್ದೇಶ ಎಂದರು.

ವಿದ್ಯಾರ್ಥಿಗಳು ಕನಸು ಕಾಣಬೇಕು. ಗುರಿ ಇರಬೇಕು. ಆದರೆ ಕನಸು ಗುರಿ ಮಾತ್ರ ಇದ್ದರೆ ಸಾಧ್ಯವಾಗುವುದಿಲ್ಲ. ಅದಕ್ಕೆ ಪೂರಕವಾದ ಶ್ರಮ ಮತ್ತು ಬುದ್ಧಿವಂತಿಕೆ ಮುಖ್ಯ ಎಂದು ಉಪರಾಷ್ಟ್ರಪತಿ ಅವರು ತಮ್ಮದೇ ಆದ ಒಂದು ಉದಾಹರಣೆ ನೀಡಿದರು. ನಾನು ಒಬ್ಬ ರೈತ ಕುಟುಂಬದಿಂದ ಸಾಮಾನ್ಯ ವರ್ಗದಿಂದ ಬಂದಂತ ವ್ಯಕ್ತಿ. ನನ್ನ ಶ್ರಮದಿಂದ ಇಂದು ನಿಮ್ಮ ಮುಂದೆ ಭಾರತ ದೇಶದ ಉಪರಾಷ್ಟ್ರಪತಿಯಾಗಿದ್ದೇನೆ ಎಂದು ವಿದ್ಯಾರ್ಥಿಗಳಿಗೆ ಸ್ಫೂರ್ತಿ ನೀಡಿದರು.

ಸಮಾಜಕ್ಕೆ ನೀವು ಏನೂ ಕೊಡುಗೆ ನೀಡದಿದ್ದರೂ ಸಮಾಜ ನಿಮಗೆ ನೀವು ನಿರೀಕ್ಷಿಸಿದಕ್ಕಿಂತ ಹೆಚ್ಚು ಕೊಡುಗೆ ನೀಡುತ್ತದೆ. ಆದರೆ ಆ ರೀತಿ ಮಾಡದೆ ಸಮಾಜಕ್ಕೆ ನಿಮ್ಮ ಸಾಮರ್ಥ್ಯಕ್ಕೆ ತಕ್ಕಂತೆ ಅಲ್ಪ ಕೊಡುಗೆಯನ್ನಾದರೂ ನೀಡಿದರೆ ದೇಶ ಬಹಳ ಬೇಗವಾಗಿ ಅಭಿವೃದ್ಧಿಯಾಗುತ್ತದೆ ಎಂದರು. ಫಲಾನುಭವಿಗಳಿಗೆ ನೇರವಾಗಿ ಸರ್ಕಾರದ ಸೌಲಭ್ಯಗಳು ತಲುಪಬೇಕು.

ಕಾರ್ಯಕ್ರಮದಲ್ಲಿ ರಾಜ್ಯಪಾಲ ವಜುಭಾಯಿ ರೂಡಭಾಯಿ ವಾಲ, ರಾಜ್ಯ ಸರ್ಕಾರದ ಗೃಹ ಸಚಿವ ರಾಮಲಿಂಗಾರೆಡ್ಡಿ, ಐ.ಐ.ಎಸ್. ನ ನಿರ್ದೇಶಕ ಅನುರಾಗ್ ಕುಮಾರ್ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

ಮಮತ/ವಿಜಯಾನಂದ/ಕೆಎಂ

**ಸಂಖ್ಯೆ:133/253**

# ಬೀಳ್ಕೊಡುಗೆ

ಬೆಂಗಳೂರು, ಸೆಪ್ಟೆಂಬರ್ 27 ( ಕರ್ನಾಟಕ ವಾರ್ತೆ) :

ಎರಡು ದಿನಗಳ ಭೇಟಿಗಾಗಿ ರಾಜ್ಯಕ್ಕೆ ಆಗಮಿಸಿದ್ದ ಭಾರತದ ಉಪ ರಾಷ್ಟ್ರಪತಿಗಳಾದ ವೆಂಕಯ್ಯನಾಯ್ಡು ಅವರನ್ನು ರಾಜ್ಯಪಾಲರಾದ ವಾಜುಭಾಯಿ ವಾಲಾ ಅವರು ಇಂದು ನಗರದ ಎಚ್.ಎ.ಎಲ್. ವಿಮಾನ ನಿಲ್ದಾಣದಲ್ಲಿ ಆತ್ಮೀಯವಾಗಿ ಬೀಳ್ಕೊಟ್ಟರು.

ಈ ಸಂದರ್ಭದಲ್ಲಿ ಗೃಹ ಸಚಿವ ರಾಮಲಿಂಗಾರೆಡ್ಡಿ ಹಾಗೂ ಇತರ ಹಿರಿಯ ಅಧಿಕಾರಿಗಳು ಹಾಜರಿದ್ದರು.

ಛಾಯಾಚಿತ್ರ ಇದರೊಂದಿಗೆ ಲಗತ್ತಿಸಿದೆ.

ಕವನ/ಕೆಎಂ

**ಸಂಖ್ಯೆ:134/254**

# Applications of GIS and Remote Sensing ಕಾರ್ಯಾಗಾರ

ಬೆಂಗಳೂರು, ಸೆಪ್ಟೆಂಬರ್ 27 ( ಕರ್ನಾಟಕ ವಾರ್ತೆ) :

ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಡೆಮಿಯು **Applications of GIS and Remote Sensing** ಎಂಬ ವಿಷಯದ ಮೇಲೆ ಅಕ್ಟೋಬರ್ 10 ರಿಂದ 12 ರವರೆಗೆ ಮೂರುದಿನಗಳ ಕಾರ್ಯಾಗಾರವನ್ನು ಅಕಾಡೆಮಿ ಕಛೇರಿಯಲ್ಲಿ (#24/2, ವಿಜ್ಞಾನ ಭವನ, 21 ನೇ ಮುಖ್ಯ ರಸ್ತೆ, ಬನಶಂಕರಿ 2 ನೇ ಹಂತ ಬೆಂಗಳೂರು–70 ಇಲ್ಲಿ ಆಯೋಜಿಸಲಿದೆ.

ಈ ಕಾರ್ಯಾಗಾರದಲ್ಲಿ ಪ್ರತಿನಿಧಿಗಳಾಗಿ ರಾಜ್ಯಾದ್ಯಂತ ವಿಜ್ಞಾನ ಪದವಿ ಕಾಲೇಜು ಅಧ್ಯಾಪಕರು (ಭೌತ ವಿಜ್ಞಾನ, ಜೀವ ವಿಜ್ಞಾನ, ಪರಿಸರ ವಿಜ್ಞಾನ, ಕಂಪ್ಯೂಟರ್ ಮತ್ತು ಭೂ ವಿಜ್ಞಾನ ವಿಭಾಗದ ಅಧ್ಯಾಪಕರಿಗೆ ಮಾತ್ರ) ಹಾಗೂ ಯುವ ಸಂಶೋಧನಾ ವಿದ್ಯಾರ್ಥಿಗಳು ಭಾಗವಹಿಸಬಹುದಾಗಿದೆ. ಸದರಿ ಕಾರ್ಯಾಗಾರಕ್ಕೆ ಪ್ರವೇಶ ಉಚಿತವಾಗಿದ್ದು, ಮೊದಲು ನೋಂದಾಯಿಸಿಕೊಂಡವರಿಗೆ ಹೆಚ್ಚಿನ ಆದ್ಯತೆಯನ್ನು ನೀಡಲಾಗುವುದು. ಕಾರ್ಯಾಗಾರದಲ್ಲಿ ಪ್ರತಿನಿಧಿಗಳಾಗಿ ನೋಂದಾಯಿಸಿಕೊಳ್ಳಲು ಅಕ್ಟೋಬರ್ 07, 2017 ಕೊನೆಯ ದಿನವಾಗಿದ್ದು, ಹೆಚ್ಚಿನ ಮಾಹಿತಿಗಾಗಿ ಅಕಾಡೆಮಿಯ ವೆಬ್‌ಸೈಟ್ ಹಾಗೂ ವೈಜ್ಞಾನಿಕಾಧಿಕಾರಿಯಾದ ವಿ.ಕೆ. ಶ್ರೀನಿವಾಸು (ಮೊ. 9620767819) ರವರನ್ನು ಸಂಪರ್ಕಿಸಬಹುದಾಗಿದೆ.

ಮಮತ/ಕೆಎಂ

## ಜವಾಹರ ನವೋದಯ ವಿದ್ಯಾಲಯ ಪ್ರವೇಶ ಪರೀಕ್ಷೆಗೆ ಅರ್ಜಿ ಆಹ್ವಾನ

ಬೆಂಗಳೂರು, ಸೆಪ್ಟೆಂಬರ್ 27 ( ಕರ್ನಾಟಕ ವಾರ್ತೆ) :

ಜವಾಹರ ನವೋದಯ ವಿದ್ಯಾಲಯವು 2018-19 ನೇ ಸಾಲಿನ 6 ನೇ ತರಗತಿಯ ದಾಖಲಾತಿಗಾಗಿ ಪ್ರವೇಶ ಪರೀಕ್ಷೆಯನ್ನು ದಿನಾಂಕ 10-2-2018 ರ ಶನಿವಾರ ಬೆಂಗಳೂರಿನ ಆಯ್ದ ಕೇಂದ್ರಗಳಲ್ಲಿ ನಡೆಸಲಿದೆ. ಈ ಪ್ರವೇಶ ಪರೀಕ್ಷೆಗೆ ಮಾನ್ಯತೆ ಪಡೆದ ಶಾಲೆಯಲ್ಲಿ 2017-18 ನೇ ಸಾಲಿನಲ್ಲಿ 5 ನೇ ತರಗತಿಯಲ್ಲಿ ಬೆಂಗಳೂರು ನಗರ ಜಿಲ್ಲೆಯಲ್ಲಿ ಓದುತ್ತಿರುವ ಮಕ್ಕಳು ಅರ್ಹರಾಗಿರುತ್ತಾರೆ.

ಮೊದಲ ಬಾರಿಗೆ ಅರ್ಜಿಗಳನ್ನು ಆನ್‌ಲೈನ್ ಮೂಲಕ ಮೂಲಕ ನೀಡಲಾಗಿದೆ. ಇದಕ್ಕೆ ಸಂಬಂಧಿಸಿದಂತೆ ವಿವರಣಾ ಪತ್ರ ಮತ್ತು ಮುಖ್ಯೋಪಾಧ್ಯಾಯರ ಧೃಢೀಕರಣ ಪತ್ರವನ್ನು ನವೋದಯ ಸಮಿತಿಯ ವೆಬ್ ಸೈಟ್ www.navodayahyd.gov.in ಮತ್ತು www.nvshq.org ನಿಂದ ಪಡೆದುಕೊಳ್ಳಬಹುದು. ಮುಖ್ಯೋಪಾಧ್ಯಯರ ಧೃಢೀಕರಣ ಪತ್ರದೊಂದಿಗೆ ಪಾಲಕರು ಕಾಮನ್ ಸರ್ವಿಸ್ ಸೆಂಟರ್‌ನಲ್ಲಿ ಅರ್ಜಿಯನ್ನು ಆನ್‌ಲೈನ್ ಮೂಲಕ ಭರ್ತಿಮಾಡಬೇಕಾಗಿರುತ್ತದೆ.

ಅರ್ಜಿಗಳನ್ನು ಆನ್‌ಲೈನ್ ಮೂಲಕ ಭರ್ತಿ ಮಾಡಲು ಕೊನೆಯ ದಿನಾಂಕ: 25-11-2017 ಆಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ವಿದ್ಯಾಲಯದ ದೂರವಾಣಿ ಸಂಖ್ಯೆ 080-28469055 ನ್ನು ಸಂಪರ್ಕಿಸಬಹುದಾಗಿದೆ.

ಮಮತ/ಕೆಎಂ

## ಸಚಿವರ ಪ್ರವಾಸ

ಬೆಂಗಳೂರು, ಸೆಪ್ಟೆಂಬರ್ 27 ( ಕರ್ನಾಟಕ ವಾರ್ತೆ) :

ಮೀನುಗಾರಿಕೆ, ಯುವಸಬಲೀಕರಣ ಮತ್ತು ಕ್ರೀಡಾ ಸಚಿವ ಪ್ರಮೋದ್ ಮಧ್ವರಾಜ್ ಅವರು ಸೆಪ್ಟೆಂಬರ್ 28 ರಂದು ಉಡುಪಿ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳುವರು.

ಮಮತ/ಕೆಎಂ

## ಅಕ್ಟೋಬರ್ 2 ರಂದು 176 ಗ್ರಾಮ ಪಂಚಾಯತಿಗಳಿಗೆ ಗಾಂಧಿ ಗ್ರಾಮ ಪುರಸ್ಕಾರ

ಬೆಂಗಳೂರು, ಸೆಪ್ಟೆಂಬರ್ 27 ( ಕರ್ನಾಟಕ ವಾರ್ತೆ) :

ಅಕ್ಟೋಬರ್ 2 ರಂದು 176 ಗ್ರಾಮ ಪಂಚಾಯತಿಗಳಿಗೆ ಗಾಂಧಿ ಗ್ರಾಮ ಪುರಸ್ಕಾರ ನೀಡಲಾಗುತ್ತದೆ. ಪ್ರತಿಯೊಂದು ಗ್ರಾಮ ಪಂಚಾಯತಿಗೂ ತಲಾ 5 ಲಕ್ಷ ರೂ. ಬಹುಮಾನ ನೀಡಲಾಗುತ್ತದೆ. ಜೊತೆಗೆ 1863 ಗ್ರಾಮ ಪಂಚಾಯತಿಗಳ ವ್ಯಾಪ್ತಿಯ 10464 ಗ್ರಾಮಗಳನ್ನು ಬಯಲು ಬಹಿರ್ದೆಸೆ ಮುಕ್ತ ಎಂದು ಘೋಷಿಸಲಾಗುತ್ತದೆ. ಒಟ್ಟು ಗ್ರಾಮ ಪಂಚಾಯತಿಗಳ ಪೈಕಿ ಶೇ. 50 ರಷ್ಟು ಗ್ರಾಮ ಪಂಚಾಯತಿಗಳು ಬಯಲು ಬಹಿರ್ದೆಸೆ ಮುಕ್ತವಾಗಲಿವೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಹೆಚ್.ಕೆ. ಪಾಟೀಲ್ ತಿಳಿಸಿದ್ದಾರೆ.

ಅವರು ಇಂದು ಮಾತನಾಡುತ್ತಾ ನವೆಂಬರ್ ವೇಳೆಗೆ 100 ತಾಲ್ಲೂಕುಗಳು ಬಯಲು ಬಹಿರ್ದೆಸೆ ಮುಕ್ತವಾಗಲಿವೆ. 2018 ರ ಅಕ್ಟೋಬರ್ ಒಳಗಾಗಿ ಇಡಿ ರಾಜ್ಯ ಬಯಲು ಬಹಿರ್ದೆಸೆ ಮುಕ್ತವಾಗಲಿದೆ. ಹೈದರಾಬಾದ್ ಕರ್ನಾಟಕದ ಕೆಲವು ಜಿಲ್ಲೆಗಳನ್ನು ಬಿಟ್ಟರೆ ರಾಜ್ಯದ ಬಹುತೇಕ ಜಿಲ್ಲೆಗಳು ಶೇ. 50 ಕ್ಕಿಂತ ಹೆಚ್ಚು ಗುರಿ ಸಾಧಿಸಿವೆ ಎಂದು ತಿಳಿಸಿದರು.

ಕೆಪಿಪಿ/ಕೆಎಂ

## ಮೋಡ ಬಿತ್ತನೆ

ಬೆಂಗಳೂರು, ಸೆಪ್ಟೆಂಬರ್ 27 ( ಕರ್ನಾಟಕ ವಾರ್ತೆ)

ರಾಜ್ಯದಲ್ಲಿ ಮೋಡ ಬಿತ್ತನೆ ಕಾರ್ಯ ತೃಪ್ತಿಕರವಾಗಿದೆ. ಮೊದಲನೆ ವಿಮಾನ 37 ದಿನಗಳ ಕಾಲ 65.38 ಗಂಟೆ ಹಾಗೂ ಎರಡನೆ ವಿಮಾನ 20 ದಿನಗಳಲ್ಲಿ 24 ಗಂಟೆ ಮೋಡ ಬಿತ್ತನೆ ಮಾಡಿದೆ. ಮೋಡ ಬಿತ್ತನೆ ಕೈಗೊಂಡ ಪ್ರದೇಶಗಳಲ್ಲಿ ಮಳೆ ಪ್ರಮಾಣ ಶೇ. 10 ರಿಂದ 25 ರಷ್ಟು ಹೆಚ್ಚಳವಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಹೆಚ್.ಕೆ. ಪಾಟೀಲ್ ತಿಳಿಸಿದ್ದಾರೆ.

ಕೆಪಿಪಿ/ಕೆಎಂ